ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೇ ಅಧಿವೇಶನ
(ಮುಂದುವರೆದ ಉಪವೇಶನಗಳು)
ಗುರುವಾರ, ದಿನಾಂಕ: ೦೮ನೇ ಜೂನ್, ೨೦೧೭

---

**ಸಮೂಹ – IV**

೧. ಮುಖ್ಯಮಂತ್ರಿಗಳು
೨. ಗೃಹ ಸಚಿವರು.
೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.
೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

---

## ಎಸ್.ಟಿ.ಪಿ. ನಿರ್ಮಾಣದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)–**

೨೪೧ (೨೪೪೩) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ (B.W.S.S.B.) ಮಂಡಳಿಯು ೨೦ ಅಥವಾ ಹೆಚ್ಚಿನ ಅಪಾರ್ಟ್‌ಮೆಂಟ್ (ಗುಂಪು ಮನೆಗಳು)ನ್ನು ಹೊಂದಿರುವವರಿಗೆ ಕೊಳಚೆ ನೀರು ಸಂಸ್ಕರಣಾ ಘಟಕ STP ನಿರ್ಮಿಸಬೇಕೆಂದು ಆದೇಶ ಮಾಡಿರುವುದು ನಿಜವೇ .

(ಆ) ಸದರಿ ಅಪಾರ್ಟ್‌ಮೆಂಟ್‌ಗಳಿಗೆ ಕೊಳಚೆ ನೀರು ಸಂಸ್ಕರಣಾ ಘಟಕ STP ಕಡ್ಡಾಯವೇ, ಅಥವಾ ಐಚ್ಛಿಕವೇ ; (ವಿವರವಾದ ಆದೇಶದೊಂದಿಗೆ ಮಾಹಿತಿ ನೀಡುವುದು)

(ಇ) ದಿನಾಂಕ: ೨೫.೦೨.೨೦೧೬ಕ್ಕೆ ಮೊದಲು ಕಟ್ಟಡವನ್ನು ಕಟ್ಟುವಾಗ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಗಳ ಪರವಾನಿಗೆ ನೀಡುವಾಗ ಮಾಲೀಕರಿಗೆ ಕೊಳಚೆ ನೀರು ಸಂಸ್ಕರಣಾ ಘಟಕ STP ಸ್ಥಾಪಿಸುವುದು ಕಡ್ಡಾಯ ಎಂದು ಅಧಿಕೃತವಾಗಿ ತಿಳಿಸಲಾಗಿತ್ತೇ ;

(ಈ) ಒಂದು ಸಲ ಪರವಾನಗಿಯ ನಿಯಮಗಳಂತೆಯೇ ಕಟ್ಟಡವನ್ನು ನಿರ್ಮಿಸಿದ ಮೇಲೆ ಅನಗತ್ಯವಾಗಿ ಜಾರಿಗೆ ತರಲಾಗದ ಆದೇಶ ನೀಡಿ ಈ ಮನೆಗಳ ನಿವಾಸಿಗಳಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಇಂತಹ ಅವೈಜ್ಞಾನಿಕ ಆದೇಶದಿಂದ ದಂಡದ ರೂಪದಲ್ಲಿ ವಸೂಲಾದ ಹಣವನ್ನು ವಾಪಸ್ಸು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸುರಂಗ ರಸ್ತೆ ನಿರ್ಮಾಣ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೨ (೨೩೯೯) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನಲ್ಲಿ ಸುರಂಗ ರಸ್ತೆ ನಿರ್ಮಾಣಕ್ಕೆ ಸರ್ಕಾರ ಉದ್ದೇಶಿಸಿದೆಯೇ ; ಉದ್ದೇಶಿಸಿದ್ದಲ್ಲಿ, ಈ ಯೋಜನೆಯ ಅಂದಾಜು ವೆಚ್ಚವೆಷ್ಟು ;

(ಆ) ನಗರದ ಯಾವ ಯಾವ ಭಾಗಗಳಿಂದ ಯಾವ ಭಾಗಗಳಿಗೆ ಸುರಂಗ ರಸ್ತೆ ಸಂಪರ್ಕ ಕಲ್ಪಿಸಲು ಉದ್ದೇಶಿಸಲಾಗಿದೆ

(ಇ) ಯೋಜನೆಯ ಅನುಕೂಲಗಳೇನು ?

## ಸೈಬರ್ ಅಪರಾಧ ತನಿಖೆ ಮತ್ತು ಕೈಗೊಂಡ ಕ್ರಮದ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೩ (೨೩೩೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸೈಬರ್ ಅಪರಾಧ ತನಿಖೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ಕೇಂದ್ರಗಳು ರಾಜ್ಯದ ಯಾವ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಆ) ಸದರಿ ಠಾಣೆಗಳಿಗೆ ಅಗತ್ಯವಾದ ತಾಂತ್ರಿಕ ಪರಿಣಿತ ತಜ್ಞರನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ; ಇವುಗಳ ಕಾರ್ಯಸಾಧನೆ ಪ್ರಗತಿ ವಿವರಗಳನ್ನು ಒದಗಿಸುವುದು ;

(ಇ) ನಗರದ ಕೆಲ ಸೈಬರ್ ಕೇಂದ್ರಗಳಲ್ಲಿ ದೂರು ಸ್ವೀಕರಿಸುವವರೇ ಇಲ್ಲದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಒಂದೊಮ್ಮೆ ಸದರಿ ಠಾಣಾಕೇಂದ್ರಗಳು ದುರಸ್ಥಿಯಲ್ಲಿದ್ದರೆ, ಇದಕ್ಕೆ ಬದಲಿ ವ್ಯವಸ್ಥೆಯನ್ನು ಕಲ್ಪಿಸುವುದು ಇಲಾಖೆಯ ಜವಾಬ್ದಾರಿಯಲ್ಲವೆ ;

(ಉ) ಈ ರೀತಿಯ ಸಮಸ್ಯೆ ಯಾವ ಸೈಬರ್ ಕೇಂದ್ರದಲ್ಲಿ ಉಂಟಾಗಿರುತ್ತದೆ ? (ವಿವರ ನೀಡುವುದು)

**ರಾಜ್ಯದ ಗಡಿಗಳಲ್ಲಿ ಪೊಲೀಸ್ ಭದ್ರತೆ ಇಲ್ಲದಿರುವ ಬಗ್ಗೆ**

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೪ (೨೩೬೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗಿನ ಗಡಿ ಭಾಗವಾದ ಕುಟ್ಟ ಗ್ರಾಮದ ಗಡಿಯ ಒಳಗೆ ಕೇರಳ ರಾಜ್ಯದಿಂದ ವೈದ್ಯಕೀಯ ತ್ಯಾಜ್ಯಗಳನ್ನು ರಾತ್ರಿವೇಳೆ ತಂದು ಹಾಕುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಗಡಿ ಭಾಗದಲ್ಲಿ ಪೊಲೀಸ್ ಸಿಬ್ಬಂದಿಗಳ ಕರ್ತವ್ಯ ನಿರ್ವಹಣೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವೈದ್ಯಕೀಯ ತ್ಯಾಜ್ಯದಿಂದ ಕೊಡಗು ಜಿಲ್ಲೆಯ ಕುಟ್ಟ ಗ್ರಾಮದ ಜನರು ಹಲವಾರು ಸಾಂಕ್ರಾಮಿಕ ರೋಗಗಳಿಗೆ ತುತ್ತಾಗುತ್ತಿದ್ದು, ಈ ವಿಚಾರವಾಗಿ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ;

(ಈ) ಸದರಿ ಗಡಿ ಭಾಗದಲ್ಲಿ ಹೆಚ್ಚಿನ ಪೊಲೀಸ್ ಭದ್ರತೆಯನ್ನು ನಿಯೋಜಿಸಲು ಇರುವ ತೊಡಕುಗಳೇನು ? (ಮಾಹಿತಿ ನೀಡುವುದು)

**ಜಾಹೀರಾತು ವಲಯದಿಂದ ಸಂಗ್ರಹವಾದ ತೆರಿಗೆ ಹಣದ ಕುರಿತು**

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೫ (೨೩೯೬) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಿಂದ ಹುಬ್ಬಳ್ಳಿ–ಧಾರವಾಡ ಹಾಗೂ ಗದಗ–ಬೆಟಗೇರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಾಹೀರಾತು ವಲಯದಿಂದ ಸಂಗ್ರಹವಾದ ತೆರಿಗೆ ಮೊತ್ತವೆಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಜಾಹೀರಾತು ತೆರಿಗೆ ವಿಧಾನದಲ್ಲಿ ನಡೆಯುತ್ತಿರುವ ಅವ್ಯವಹಾರ ಮತ್ತು ತೆರಿಗೆ ವಂಚನೆಯನ್ನು ತಪ್ಪಿಸಲು ಸರ್ಕಾರ ಅನುಸರಿಸುತ್ತಿರುವ ಕಾನೂನು ಕ್ರಮಗಳೇನು ;

(ಇ) ಜಾಹೀರಾತು ತೆರಿಗೆ ಸಂಗ್ರಹಣೆ ರೀತಿ ನೀತಿಯುಲ್ಲಿರುವ ಲೋಪದೋಷಗಳಾವುವು; ತೆರಿಗೆ ವಂಚನೆಯ ಕುರಿತು ಗುರುತಿಸಲಾಗಿರುವ ಪ್ರಕರಣಗಳ ಮೇಲೆ ಜರುಗಿಸಿರುವ ಕಾನೂನು ಕ್ರಮಗಳಾವುವು ; ಅಂತಹ ಎಷ್ಟು ಪ್ರಕರಣಗಳಲ್ಲಿ ಎಷ್ಟು ಜಾಹೀರಾತು ಕಂಪನಿಗಳ ವಿರುದ್ಧ ಯಾವ ರೀತಿಯ ಮೊಕದ್ದಮೆಗಳನ್ನು ದಾಖಲಿಸಿಕೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕಾರ್ಖಾನೆಗಳಿಂದ ರೈತರುಗಳಿಗೆ ಬರಬೇಕಾದ ಬಾಕಿ ಹಣ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೨೪೬ (೩೩೧೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಮತ್ತು ಖಾಸಗಿ ಒಡೆತನದಲ್ಲಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಕಾರ್ಖಾನೆಗಳ ಸ್ಥಿರಾಸ್ತಿ ಮೊತ್ತ ಎಷ್ಟು ; (ಪ್ರತ್ಯೇಕ ಕಾರ್ಖಾನೆಗಳವಾರು ಮಾಹಿತಿ ನೀಡುವುದು)

(ಇ) ಸದರಿ ಕಾರ್ಖಾನೆಗಳ ವಾರ್ಷಿಕ ಆದಾಯ ಎಷ್ಟು ; ಹಾಗೂ ಸರ್ಕಾರದಿಂದ ಈ ಕಾರ್ಖಾನೆಗಳಿಗೆ ನೀಡಿರುವ ಅನುದಾನ/ಸಾಲ ಎಷ್ಟು ; (ಕಾರ್ಖಾನೆಗಳವಾರು, ವರ್ಷಾವಾರು ಸ್ಪಷ್ಟ ಮಾಹಿತಿ ನೀಡುವುದು)

(ಈ) ಈ ಕಾರ್ಖಾನೆಗಳಿಂದ ಜಿಲ್ಲೆಯ ರೈತರುಗಳಿಗೆ ಬರಬೇಕಾದ ಬಾಕಿ ಹಣ ಎಷ್ಟು ? (ಕಾರ್ಖಾನೆವಾರು ರೈತರವಾರು ವಿವರ ನೀಡುವುದು)

## ತುಮಕೂರು ನಗರಕ್ಕೆ ಕುಡಿಯುವ ನೀರಿನ ಸರಬರಾಜು ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೭ (೩೩೪೧) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಮಕೂರು ನಗರದಲ್ಲಿ ಕುಡಿಯುವ ನೀರಿಗೆ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ನಗರಕ್ಕೆ ನೀರು ಸರಬರಾಜು ಮಾಡಲು ಯಾವುದೇ ಖಾಯಂ ಯೋಜನೆಯನ್ನು ರೂಪಿಸದಿರುವುದು ಸರ್ಕಾರದ ಗಮನಕ್ಕ ಬಂದಿಲ್ಲವೆ ;

(ಇ) ಬಂದಿದ್ದಲ್ಲಿ,, ಶಾಶ್ವತ ಕುಡಿಯುವ ನೀರಿಗಾಗಿ ರೂಪಿಸಿರುವ ಯೋಜನೆಗಳಾವುವು; (ವಿವರ ನೀಡುವುದು)

(ಈ) ತುಮಕೂರು ನಗರದಲ್ಲಿ ಬೀಳುವ ಮಳೆ ನೀರನ್ನು ಕೆರೆಗಳಿಗೆ ಪೂರೈಸಲು ಪ್ರತ್ಯೇಕವಾಗಿ ಕೊಳವೆ ಮಾರ್ಗ ನಿರ್ಮಿಸುವ ಯೋಜನೆಯನ್ನ ಸ್ಮಾರ್ಟ್ ಸಿಟಿ ಯೋಜನೆಯಡಿ ಜಾರಿಗೆ ತರಲು ಸರ್ಕಾರಕ್ಕಿರುವ ತೊಂದರೆಯಾದರು ಏನು ; (ವಿವರ ನೀಡುವುದು)

(ಉ) ಈ ಯೋಜನೆಯನ್ನು ಜಾರಿಗೆ ತಂದು ದಿನೇ ದಿನೇ ಜನ ಸಂಖ್ಯೆ ಅತ್ಯಧಿಕ ಸಂಖ್ಯೆಯಲ್ಲಿ ಬೆಳೆಯುತ್ತಿರುವ ತುಮಕೂರಿಗೆ ಶಾಶ್ವತ ಕುಡಿಯುವ ನೀರನ್ನು ನೀಡಲು ಸರ್ಕಾರ ಸ್ಪಷ್ಟ ಭರವಸೆಯನ್ನು ನೀಡುವುದರ ಜೊತೆಗೆ ಕಾರ್ಯಕ್ರಮ ರೂಪಿಸಲು ತಕ್ಷಣವೆ ಕ್ರಮ ವಹಿಸುವುದೇ ? (ವಿವರ ನೀಡುವುದು)

## ಕುಡಿಯುವ ನೀರಿಗಾಗಿ ಕೆರೆ ನಿರ್ಮಾಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೪೮ (೨೩೯೩) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ –

ಮಾನವಿ ಪಟ್ಟಣಕ್ಕೆ ಕುಡಿಯುವ ನೀರಿಗಾಗಿ ಕೆರೆ ನಿರ್ಮಾಣ ಮಾಡಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ತೆಗೆದುಕೊಂಡಿರುವ ಕ್ರಮವೇನು ?

## ಅನುದಾನಿತ ಐ.ಟಿ.ಐ. ಸಂಸ್ಥೆಗಳ ನೌಕರರ ಸಮಸ್ಯೆಗಳ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) –**

೨೪೯ (೨೩೫೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಐ.ಟಿ.ಐ. ಸಂಸ್ಥೆಗಳೆಷ್ಟು ; ಹಾಗೂ ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರೆಷ್ಟು ; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಆ) ಥಾಮಸ್ ವರದಿಯ ಶಿಫಾರಸ್ಸಿನನ್ವಯ ಅನುದಾನಿತ ಐ.ಟಿ.ಐ. ಸಿಬ್ಬಂದಿಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ನೀಡುತ್ತಿರುವಂತೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; (ಜಾರಿಗೊಳಿಸಿದ ದಿನಾಂಕ ಸಹಿತ ಪಿಂಚಣಿ, ಗ್ರಾಚ್ಯುಯಿಟಿ ಇನ್ನಿತರೆ ಸೌಲಭ್ಯಗಳ ವಿವರ ನೀಡುವುದು)

(ಇ) ಥಾಮಸ್ ವರದಿಯ ಶಿಫಾರಸ್ಸಿನ ಅನ್ವಯ ಎಷ್ಟು ನೌಕರರಿಗೆ ಸೌಲಭ್ಯವನ್ನು ನೀಡಲಾಗಿದೆ ; ಇನ್ನು ಎಷ್ಟು ಮಂದಿಗೆ ಸೌಲಭ್ಯ ನೀಡಬೇಕಾಗಿದೆ ; ಸೌಲಭ್ಯ ನೀಡಲು ಇರುವ ಸಮಸ್ಯೆಗಳೇನು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಸೌಲಭ್ಯಗಳನ್ನು ನೀಡಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಉ) ಥಾಮಸ್ ವರದಿಯ ಪ್ರಕಾರ ೧೯೯೭ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಲಾಗಿದೆಯೇ ; ಇದುವರೆಗೆ ಪರಿಷ್ಕರಿಸದಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಪರಿಷ್ಕರಿಸಲಾಗುವುದು ? (ವಿವರ ನೀಡುವುದು)

**ರಾಜ್ಯ ಸರ್ಕಾರಿ ನೌಕರರಿಗೆ ೭ನೇ ವೇತನ ಆಯೋಗವನ್ನು ರಚಿಸುವ ಬಗ್ಗೆ**

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೨೫೦ (೨೩೩೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರಿ ನೌಕರರಿಗೆ ೭ನೇ ವೇತನ ಆಯೋಗ ರಚನೆ ಪ್ರಕ್ರಿಯೆ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವಾಗ ೭ನೇ ವೇತನ ಆಯೋಗವನ್ನು ರಚಿಸಲಾಗುವುದು ;

(ಇ) ಈ ಆಯೋಗದ ಸ್ವರೂಪ ಏನು ; ಯಾರೆಲ್ಲಾ ಈ ಆಯೋಗದಲ್ಲಿರುತ್ತಾರೆ ;

(ಈ) ಈ ಆಯೋಗದ ವರದಿಯನ್ನು ಯಾವಾಗ ಜಾರಿಗೆ ಕೊಡಲಾಗುವುದು ;

(ಉ) ವರದಿ ಜಾರಿಗೆ ತರುವವರೆಗೆ ಸರ್ಕಾರಿ ನೌಕರರಿಗೆ ಮಧ್ಯಂತರ ಪರಿಹಾರವನ್ನು ನೀಡಲು ಸರ್ಕಾರ ಆಲೋಚಿಸಿದೆಯೇ ;

(ಊ) ಆಲೋಚಿಸಿದ್ದಲ್ಲಿ, ಎಷ್ಟು ಮಧ್ಯಂತರ ಪರಿಹಾರ ನೀಡಲಾಗುವುದು ; ಯಾವಾಗ ಜಾರಿಗೊಳಿಸಲಾಗುವುದು ?

## ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಪಕ್ಕದಲ್ಲಿರುವ ಮದ್ಯದಂಗಡಿಗಳನ್ನು ತೆರವುಗೊಳಿಸುವ ಬಗ್ಗೆ

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೧ (೨೩೯೮+೨೪೨೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಂ.ಎಸ್.ಐ.ಎಲ್. ಮಳಿಗೆ ತೆರೆಯಲು ಎಷ್ಟು ಪ್ರಸ್ತಾವನೆಗಳು ಬಂದಿರುತ್ತವೆ ; ಹಾಗೂ ಮಳಿಗೆ ತೆರೆಯಲು ಗುರುತಿಸಿರುವ ಸ್ಥಳಗಳು ಯಾವುವು; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

(ಆ) ಅಬಕಾರಿ ಇಲಾಖೆಗೆ ಈಗಾಗಲೇ ಮಾನ್ಯ ಭಾರತದ ಸರ್ವೋಚ್ಛ ನ್ಯಾಯಾಲಯ ರಾಜ್ಯ ಹೆದ್ದಾರಿಯಿಂದ ೨೫೦ ಮೀಟರ್ ದೂರದಲ್ಲಿ ಇರುವ ಮದ್ಯದಂಗಡಿ ಸ್ಥಳಾಂತರಿಸುವಂತೆ ಆದೇಶ ಹೊರಡಿಸಿದ್ದರೂ ಸರ್ಕಾರ ಇದುವರೆಗೂ ತೆಗೆದುಕೊಂಡ ಕ್ರಮಗಳಾವುವು ; ಹಾಗೂ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿರುವ ಮದ್ಯದಂಗಡಿಗಳನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶ ಪಾಲನೆ ಮಾಡಲು ಸರ್ಕಾರಕ್ಕೆ ತೊಂದರೆ ಇದೆಯೇ ; ಇಲ್ಲವಾದಲ್ಲಿ, ಕೈಗೊಂಡ ಕ್ರಮಗಳು ಏನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಮದ್ಯದಂಗಡಿಗಳನ್ನು ತೆರವುಗೊಳಿಸುವ ಸಂಬಂಧ ಜಿಲ್ಲಾವಾರು ಮದ್ಯದಂಗಡಿಗಳ ಪಟ್ಟಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಜಿಲ್ಲಾವಾರು ಪಟ್ಟಿ ನೀಡುವುದು ;

(ಉ) ಈ ಮದ್ಯದಂಗಡಿಗಳನ್ನು ತೆರವುಗೊಳಿಸಲು ಸರ್ಕಾರವು ಕಾಲಮಿತಿಯನ್ನು ನಿಗಧಿಪಡಿಸಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ಕರ್ನಾಟಕ ಲೋಕ ಸೇವಾ ಆಯೋಗದ ಬಗ್ಗೆ

**ಶ್ರೀ ರಮೇಶ ಬಾಬು (ಶಿಕ್ಷಕರ ಕ್ಷೇತ್ರ) –**

೨೫೨ (೨೩೮೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಲೋಕಸೇವಾ ಆಯೋಗವು ಪ್ರತಿ ವರ್ಷ ರಾಜ್ಯ ಸರ್ಕಾರಕ್ಕೆ ವಾರ್ಷಿಕ ವರದಿ ಮಂಡನೆ ಮಾಡುತ್ತಿದೆಯೇ ; ಮಾಡಿದ್ದಲ್ಲಿ, ೨೦೧೫–೧೬ ಮತ್ತು ೨೦೧೬–೧೭ನೇ ವಾರ್ಷಿಕ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ;

(ಆ) ಕರ್ನಾಟಕ ಸರ್ಕಾರ ಲೋಕಸೇವಾ ಆಯೋಗದಲ್ಲಿ ದುರ್ನಡತೆಯ ಆರೋಪದ ಮೇರೆಗೆ ಶಿಸ್ತು ಕ್ರಮ ಕೋರಿ ಎಷ್ಟು ಪ್ರಕರಣಗಳಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿದೆ; ಸಲ್ಲಿಸಿದ್ದಲ್ಲಿ, ಯಾವಾಗ ತಪ್ಪಿತಸ್ಥರ ವಿರುದ್ಧ ಯಾವ ಶಿಸ್ತು ಕ್ರಮ ಜರುಗಿಸಲಾಗಿದೆ;

(ಇ) ೨೦೧೬–೧೭ನೇ ಸಾಲಿನಲ್ಲಿ ಕರ್ನಾಟಕ ಸರ್ಕಾರ ಲೋಕಸೇವಾ ಆಯೋಗವು ರಾಜ್ಯ ಸರ್ಕಾರಿ ನೌಕರರ ಎಷ್ಟು ಇಲಾಖೆಗಳಿಗೆ ಇಲಾಖಾ ಪರೀಕ್ಷೆಯನ್ನು ನಡೆಸಿರುತ್ತದೆ ; ರಾಜ್ಯ ಸರ್ಕಾರದ ಎಷ್ಟು ಇಲಾಖೆಯ ನೌಕರರಿಗೆ ಬಡ್ತಿಯ ಅನುಮೋದನೆಯನ್ನು ನೀಡಿರುತ್ತದೆ ;

(ಈ) ದಿನಾಂಕ: ೧೯.೦೮.೨೦೧೬ರಲ್ಲಿ ಭ್ರಷ್ಟಾಚಾರ ನಿಗ್ರಹ ದಳ ಲೋಕಸೇವಾ ಆಯೋಗದ ಅಧ್ಯಕ್ಷರ ಮೇಲೆ ಮೊಕದ್ದಮೆ ಹೂಡಲು ಅನುಮತಿ ಕೋರಿ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರಿಗೆ ಸಲ್ಲಿಸಿರುವ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆಯೇ ; ಇಲ್ಲದೇ ಇದ್ದಲ್ಲಿ ; ನೀಡದಿರಲು ಕಾರಣವೇನು?

## ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೩ (೨೪೨೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಎಷ್ಟು ಹುದ್ದಗಳು ಖಾಲಿ ಇವೆ ; (ಇಲಾಖಾವಾರು ಮಾಹಿತಿ ಒದಗಿಸುವುದು)

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಎಷ್ಟು ಹುದ್ದೆಗಳನ್ನು ತುಂಬಲಾಗಿದೆ ; (ಇಲಾಖಾವಾರು ವರ್ಷವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

### ವಿಜಯಪುರ ಮಹಾನಗರ ಪಾಲಿಕೆ ಮಾಸ್ಟರ್ ಪ್ಲಾನ್

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫೪ (೩೩೭೩) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ಮಹಾನಗರ ಪಾಲಿಕೆ ಹಾಗೂ ರಾಜ್ಯ ಸರ್ಕಾರದಿಂದ ಬಂದ ಅನುದಾನವೆಷ್ಟು ; ಪ್ರತಿ ವರ್ಷ ವಿವಿಧ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು ; (ಯೋಜನೆವಾರು ವಿವರವಾದ ಮಾಹಿತಿ ನೀಡುವುದು)

(ಆ) ವಿಜಯಪುರ ಮಹಾನಗರ ಪಾಲಿಕೆ ಮಾಸ್ಟರ್ ಪ್ಲಾನ್‌ಗೆ ಮಂಜೂರಾದ ಅನುದಾನವೆಷ್ಟು ; ಸದರಿ ಯೋಜನೆಯಡಿಯಲ್ಲಿ ಆಸ್ತಿಗಳನ್ನು ಕಳೆದುಕೊಂಡ ಫಲಾನುಭವಿಗಳಿಗೆ ನೀಡಿದ ಪರಿಹಾರಧನವೆಷ್ಟು ; (ಫಲಾನುಭವಿಗಳ ಹೆಸರು ಸಮೇತ ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಖರ್ಚಾಗಿದ ; ಉಳಿದಿರುವ ಅನುದಾನವೆಷ್ಟು; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಮಾಸ್ಟರ್ ಪ್ಲಾನ್‌ಗೆ ೩೩ ಕೋಟಿ ಖರ್ಚಾಗಿದ್ದು, ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ಖರ್ಚಾಗಿದೆ ? (ಕಾಮಗಾರಿವಾರು ಮಾಹಿತಿ ನೀಡುವುದು)

### ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವರ್ಗದವರಿಗೆ ವಿತರಿಸಲಾಗುವ ಸಾಲ ಸೌಲಭ್ಯದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೫೫ (೩೩೬೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಉದ್ದಿಮೆದಾರರಿಗೆ ಗರಿಷ್ಠ ಎಷ್ಟು ಮೊತ್ತದ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ;

(ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳು ಕನಿಷ್ಠ ಎಷ್ಟು ಮೊತ್ತದಿಂದ ಸಾಲವನ್ನು ಪಡೆಯಲು ಅರ್ಹರಿರುತ್ತಾರೆ ;

(ಇ) ಸಾಲದ ಕನಿಷ್ಠ ಮೊತ್ತವನ್ನು ಕಡಿಮೆ ಮಾಡುವ ಪ್ರಸ್ತಾವನೆ ಸರ್ಕಾರದಲ್ಲಿದೆಯೇ;

(ಈ) ಚಿಕ್ಕಮಗಳೂರು ಜಿಲ್ಲೆಯಲ್ಲಿ ೨೦೧೬-೧೭ನೇ ಸಾಲಿನಲ್ಲಿ ಎಷ್ಟು ಫಲಾನುಭವಿಗಳೀಗೆ ಸಾಲ ಸೌಲಭ್ಯ ವಿತರಿಸಲಾಗಿದೆ ; ವಿತರಿಸಲಾಗಿರುವ ಒಟ್ಟು ಮೊತ್ತವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 190, ಪ್ರತಿಗಳು 1500